**ದಿನಾಂಕಃ 19.03.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ. ಕೆ ಎಸ್ ಎಸ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ಸಾಕ್ಷಿದಾರರು ನಿಡಿ-2 ರ ಮರಣ ಶಾಸನ ಪ್ರಮಾಣ ಪತ್ರದಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ಸಹಿಯನ್ನು ನಿಡಿ-2(ಡಿ) ಎಂದು, ಸಾಕ್ಷಿದಾರರು ನಿಡಿ-2 ರ ಮರಣ ಶಾಸನ ಪ್ರಮಾಣ ಪತ್ರದಲ್ಲಿರುವ ಮಲ್ಲಪ್ಪರವರ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಯು ಈಗಾಗಲೇ ನಿಡಿ-2(ಬಿ) ಎಂದು ಗುರುತಿಸಲ್ಪಟ್ಟಿರುತ್ತದೆ.

ಈ ಹಂತದಲ್ಲಿ ವಾದಿ ಪರ ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ